ಇ) ಸೇಂದಿವನದ ಜಮೀನಿನಲ್ಲಿ ಬಗರ್ ಹುಕುಂ ಸಾಗುವಳಿ ಮಾಡುತ್ತಿರುವವರಿಗೆ ಸಕ್ರಮಗೊಳಿಸುವ ಬಗ್ಗೆ ಸಚಿವ ಸಂಪುಟದ ಉಪ ಸಮಿತಿಯ ಮುಂದೆ ತೀರ್ಮಾನಕ್ಕೆ ಇಡಲಾಗಿದೆ. ಸದರಿ ತೀರ್ಮಾನದ ನಂತರ ಅದರಂತೆ ಕ್ರಮ ತೆಗೆದುಕೊಳ್ಳಲಾಗುವುದು.

ಹೊಸದುರ್ಗ ತಾಲ್ಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಣೆ

265 - ಶ್ರೀ ಟಿ.ಹೆಚ್. ಬಸವರಾಜ್ (ಹೊಸದುರ್ಗ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹೊಸದುರ್ಗ ತಾಲ್ಲೂಕಿನ ವ್ಯಾಪ್ತಿಯಲ್ಲಿ 1995-96ನೇ ಸಾಲಿನಲ್ಲಿ ಮಳೆಯ ಅಭಾವದಿಂದ ಹಿಂಗಾರು ಮತ್ತು ಮುಂಗಾರು ಬೆಳೆ ವೈಪಲ್ಯವಾಗಿದ್ದು, ಸರ್ಕಾರದವರು ಈ ಪ್ರದೇಶವನ್ನು ಬರ ಪೀಡಿತ ಪ್ರದೇಶವೆಂದು ಘೋಷಣೆ ಮಾಡಲು ಕ್ರಮ ತೆಗೆದುಕೊಂಡಿದೆಯೇ?*

ಆ) *ತೆಗೆದುಕೊಂಡಿದ್ದರೆ, ಇದರಿಂದ ತಾಲ್ಲೂಕಿಗೆ ಆಗುವ ಅನುಕೂಲಗಳೇನು?*

ಇ) *ಬರಪೀಡಿತ ಪ್ರದೇಶವಾದ್ದರಿಂದ ಜಾನುವಾರುಗಳಿಗೆ ಆತಿ ಶೀಘ್ರವಾಗಿ ಬೇಕಾಗುವ ಮೇವಿನ ಬಗ್ಗೆ ಕ್ರಮ ತೆಗೆದುಕೊಂಡಿದಿಯೇ?*

ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಸಚಿವರು) :

ಅ) ಇಲ್ಲ, ಹೊಸದುರ್ಗ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸರಬರಾಜಿಗೆ ರೂ. 15.10 ಲಕ್ಷಗಳು ಹಾಗೂ ಮೇವು ಸರಬರಾಜಿಗಾಗಿ ರೂ.1.00 ಲಕ್ಷಗಳನ್ನು ಒದಗಿಸಲಾಗಿದೆ.

ಆ) ಮೇಲಿನ (ಅ)ಗೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಹೊಸದುರ್ಗ ತಾಲ್ಲೂಕಿನಲ್ಲಿ ಮೇವು ಸರಬರಾಜಿಗಾಗಿ ಒಂದು ಲಕ್ಷ ರೂ.ಗಳನ್ನು ಒದಗಿಸಿದ್ದು, ಮೇವು ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗಿದೆ. ಮುಂಜಾಗ್ರತಾ ಕ್ರಮವಾಗಿ ಬಲ್ಲಾಳ ಸಮುದ್ರ ಕಾವಲ್‌ನ 80 ಹೆಕ್ಟೇರ್ ಹಾಗೂ ದೇವಪುರ ಕಾವಲ್‌ನ 20 ಹೆಕ್ಟೇರ್ ಪ್ರದೇಶಗಳಲ್ಲಿ ಮೇವನ್ನು ಬೆಳಿಸಲಾಗುತ್ತಿದೆ. ನೀರಾವರಿ ಮೂಲ ಇರುವ ಖಾಸಗಿ ಜಮೀನುಗಳಲ್ಲಿ ಮೇವನ್ನು ಬೆಳಿಸಲು ಕ್ರಮ ಕೈಗೊಳ್ಳಲಾಗಿದೆ.

ಖಾಸಗಿ ಐ.ಟಿ.ಐ.ಗಳಿಗೆ ಅನುದಾನ ಜಾರಿ

192 - ಶ್ರೀ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಖಾಸಗಿ ಐ.ಟಿ.ಐ.ಗಳಿಗೆ ಅನುದಾನ ಬಿಡುಗಡೆ ಗೊಳಿಸುವ ಕುರಿತು ಸರ್ಕಾರ ನೀಡಿದ ಆಶ್ವಾಸನೆಯನ್ನು ಈಡೇರಿಸದಿರಲು ಕಾರಣಗಳೇನು?*

ಆ) *ಈ ಬಗ್ಗೆ ಸರ್ಕಾರ ತುರ್ತಾಗಿ ಕ್ರಮ ಕೈಗೊಳ್ಳುವುದೇ?*

ಶ್ರೀ ಸಿ. ಗುರುನಾಥ್ (ಕಾರ್ಮಿಕ ಸಚಿವರು) :

ಅ) ರಾಜ್ಯದಲ್ಲಿ ಪ್ರಸ್ತುತ 200 ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಿವೆ. 1994ನೇ ಸಾಲಿನಲ್ಲಿ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿವರ್ಗದವರಿಗೆ ವೇತನ ಅನುದಾನವನ್ನು ಮರುಪಾವತಿ ಮಾಡುವ ಮೂಲಕ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ನೆರವು ನೀಡಲು ಸರ್ಕಾರವು ತೀರ್ಮಾನಿಸಿದೆ. ಈ ತೀರ್ಮಾನವು ಎರಡು ಅಂಶಗಳನ್ನೊಳಗೊಂಡಿದೆ